10. ಚುನಾವಣಾ ಪ್ರಸ್ತಾವ

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಕುಟುಂಬ ಕಲ್ಯಾಣ ಮತ್ತು ಪಾರ್ಲಿಮೆಂಟರಿ ವ್ಯವಹಾರಗಳ ಸಚಿವರು) ಮಾನ್ಯ ಅಧ್ಯಕ್ಷರೆ,ಹಾಗೂ ಕಾನೂನು ಸಂಸದೀಯ ವ್ಯವಹಾರಗಳ ಸಚಿವರ ಪರವಾಗಿ : ಈಗಾಗಲೇ 16ನೇ ಜುಲೈ 2002ರಂದು ಕರ್ನಾಟಕ ವಿಧಾನಮಂಡಲದ ವಿವಿಧ ಸ್ಥಾಯಿ ಸಮಿತಿಗಳಿಗೆ ಹಾಗೂ ಕನ್ನಡ ವಿಶ್ವವಿದ್ಯಾನಿಲಯದ ಆಡಳಿತ ಮಂಡಳಿಗೆ ಚುನಾವಣಾ ಪ್ರಸ್ತಾವನೆ ಮಂಡಿಸಿದ್ದು, ಚುನಾವಣಾ ಕಾರ್ಯ ವೇಳಾಪಟ್ಟಿಯನ್ನು ಹೊರಡಿಸಲಾಗಿರುತ್ತದೆ. ಈ ಕುರಿತು ವಿವಿಧ ಪಕ್ಷಗಳ ಸಚೇತರುಗಳು ನೀಡಿರುವ ಒಡಂಬಡಿಕೆ ಪಟ್ಟಿಯ ರೀತ್ಯ ಮಾನ್ಯ ವಿಧಾನಸಭಾ ಸದಸ್ಯರುಗಳನ್ನೊಳಗೊಂಡ ವಿವಿಧ ಸಮಿತಿಗಳನ್ನು ರಚಿಸಲು ಹಾಗೂ ಕನ್ನಡ ವಿಶ್ವವಿದ್ಯಾನಿಲಯದ ಆಡಳಿತ ಮಂಡಳಿಗೆ ಮಾನ್ಯ ಸದಸ್ಯರನ್ನು ನೇಮಿಸಲಗು ಮಾನ್ಯ ವಿಧಾನಸಭಾಧ್ಯಕ್ಷರಿಗೆ ಅಧಿಕಾರವನ್ನು ಈ ಸದನವು ನೀಡಬೇಕೆಂದು ಕೋರುತ್ತೇನೆ.

ಪ್ರಸ್ತಾವ ಮಂಡಿಸಲ್ಪಟ್ಟಿತು.

ಅಧ್ಯಕ್ಷರು : ಪ್ರಾಸ್ತಾವ ಏನೆಂದರೆ, "16ನೇ ಜುಲೈ 2002ರಂದು ಕರ್ನಾಟಕ ವಿಧಾನಮಂಡಲದ ವಿವಿಧ ಸ್ಥಾಯಿ ಸಮಿತಿಗಳಿಗೆ ಹಾಗೂ ಕನ್ನಡ ವಿಶ್ವವಿದ್ಯಾನಿಲಯದ ಆಡಳಿತ ಮಂಡಳಿಗೆ ಚುನಾವಣಾ ಪ್ರಸ್ತಾವನೆ ಮಂಡಿಸಿದ್ದು, ಚುನಾವಣಾ ಕಾರ್ಯ ವೇಳಾಪಟ್ಟಿಯನ್ನು ಹೊರಡಿಸಲಾಗಿರುತ್ತದೆ. ಈ ಕುರಿತು ವಿವಿಧ ಪಕ್ಷಗಳ ಸಚೇತರುಗಳು ನೀಡಿರುವ ಒಡಂಬಡಿಕೆ ಪಟ್ಟಿಯ ರೀತ್ಯ ಮಾನ್ಯ ವಿಧಾನಸಭಾ ಸದಸ್ಯರುಗಳನ್ನೊಳಗೊಂಡ ವಿವಿಧ ಸಮಿತಿಗಳನ್ನು ರಚಿಸಲು ಹಾಗೂ ಕನ್ನಡ ವಿಶ್ವವಿದ್ಯಾನಿಲಯದ ಆಡಳಿತ ಮಂಡಳಿಗೆ ಮಾನ್ಯ ಸದಸ್ಯರನ್ನು ನೇಮಿಸಲು ಮಾನ್ಯ ವಿಧಾನಸಭಾಧ್ಯಕ್ಷರಿಗೆ ಈ ಸದನವು ಅಧಿಕಾರವನ್ನು ನೀಡುವುದು."

ಪ್ರಸ್ತಾವವನ್ನು ಸರ್ವಾನುಮತದಿಂದ ಅಂಗೀಕರಿಸಲಾಯಿತು

11. ಶಾಸನ ರಚನೆ

ಅ. ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ) ವಿಧೇಯಕ, 2002

ಆ. ಪರ್ಯಾಲೋಚನಾ ಪ್ರಸ್ತಾವ

+ ಶ್ರೀ ಆರ್.ವಿ. ದೇಶಪಾಂಡೆ (ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು : ಮಾನ್ಯ ಅಧ್ಯಕ್ಷರೆ, "2002ರ ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ."

ಪ್ರಸ್ತಾವ ಮಂಡಿಸಲ್ಪಟ್ಟಿತು

ಶ್ರೀ ಆರ್. ವಿ. ದೇಶಪಾಂಡೆ : ಮಾನ್ಯ ಅಧ್ಯಕ್ಷರೆ, ಕರ್ನಾಟಕ ರಾಜ್ಯ ಒಂದು ಪ್ರೋಗ್ರೆಸಿವ್ ಇಂಡಸ್ಟ್ರಿಯಲ್ ಸ್ಟೇಟ್ ಆಗಿದೆ. ಸರ್ ಎಂ. ವಿಶ್ವೇಶ್ವರಯ್ಯನವರ ಕಾಲದಿಂದಲೂ ರಾಜ್ಯದಲ್ಲಿ ಕೈಗಾರಿಕೆಗಳು ಬೆಳೆಯುತ್ತಾ ಬಂದಿದೆ. ಅದೇ ಪ್ರಕಾರ ಸಕ್ಷೆಸಿವ್ ಗೌವರ್ನಮೆಂಟ್ ಈ ರಾಜ್ಯದಲ್ಲಿ ಕೈಗಾರಿಕೆ ಬೆಳೆಯಬೇಕೆಂಬ ಉದ್ದೇಶದಿಂದ ಉತ್ತೇಜನ ನೀಡುತ್ತಾ ಬರುತ್ತಿದೆ. ಆದರೆ, ಇವೊತ್ತಿನ 21ನೇ ಶತಮಾನದಲ್ಲಿ ಪಾರದರ್ಶಕತೆ ಮತ್ತು ಸಿಂಪ್ಲಿಸಿಟಿ ಎಷ್ಟು ಸಾಧ್ಯವೋ ಅಷ್ಟು ತರುವುದು ಸರ್ಕಾರದ ಜವಾಬ್ದಾರಿಯಾಗಿರುತ್ತದೆ. ಏಕೆಂದರೆ, ಯಾರು ಇನ್‌ವೆಸ್ಟ್ ಮಾಡಲು ಬರುತ್ತಾರೆ, ಮುಖ್ಯವಾಗಿ ಟೆಕ್ನೊಕ್ರಾಟ್ಸ್ ಇರಬಹುದು, ಸಣ್ಣ ಕೈಗಾರಿಕೆಗಳಿರಬಹುದು, ದೊಡ್ಡ